15

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಬಜೆಟ್ (ಕೇಂದ್ರ)

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ    ದಿನಾಂಕ : DATE : 1/2/2020

ದೇಶದ ಮೊದಲ ಪೂರ್ಣಾವಧಿ ವಿತ್ತ ಸಚಿವೆ ಎಂಬ ಹಿರಿಮೆ ಗಳಿಸಿಕೊಂಡಿರುವ ನಿರ್ಮಲಾ ಸೀತಾರಾಮನ್, ತಮ್ಮ ಎರಡನೇ ಬಜೆಟ್ ಮಂಡನೆಗೆ ಸಿದ್ಧರಾಗಿದ್ದಾರೆ. ಶನಿವಾರ ಬೆಳಗ್ಗೆ 11 ಗಂಟೆಗೆ 'ನಿರ್ಮಲಾ ಲೆಕ್ಕಾಚಾರ' ಬಹಿರಂಗವಾಗಲಿದೆ.

ಉವಾ 01/2/20

# ಯಾರ ಮೇಲೆ ನಿರ್ಮಲಾ ಕರುಣೆ?

## ಇಂದು ಬೆಳಗ್ಗೆ 11 ಗಂಟೆಗೆ ನಿರ್ಮಲಾ ಬಜೆಟ್

## 2ನೇ ಮುಂಗಡ ಪತ್ರ ಮಂಡಿಸುತ್ತಿರುವ ವಿತ್ತ ಸಚಿವೆ



### ಮುಂಗಡ ಲೆಕ್ಕಾಚಾರವೇನು?

**ಜಿಡಿಪಿ ಸವಾಲು**

2018-19ರಲ್ಲಿ ಶೇ.6.8ರಷ್ಟಿದ್ದ ಭಾರತದ ಜಿಡಿಪಿ ದರ, 2019-20ಕ್ಕೆ ಸೀದಾ ಶೇ.5ಕ್ಕೆ ಇಳಿಕೆಯಾಗಿದೆ. ಮತ್ತೆ ಆರ್ಥಿಕತೆ ಹಳಿಗೆ ತರಲು ಯಾವ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂಬ ಕುತೂಹಲವಿದೆ.

**ಆದಾಯ ತೆರಿಗೆ**

ಬಜೆಟ್ ಎಂದರೆ ಎಲ್ಲರ ಕಣ್ಣು ಆದಾಯ ತೆರಿಗೆ ವಿನಾಯಿತಿ ಮಿತಿ ಮೇಲೆ. ಇದರ ಸ್ಲ್ಯಾಬ್‌ಗಳ ಬದಲಾವಣೆಯಾಗಬಹುದು ಎಂಬ ನಿರೀಕ್ಷೆ ಉಂಟು. ಈಗಿರುವ 2.5 ಲಕ್ಷ ರೂ. ಮಿತಿಯನ್ನು ಏರಿಕೆ ಮಾಡಲಿ ಎಂಬ ಬೇಡಿಕೆಯೂ ಇದೆ.

**ಹಣದುಬ್ಬರ ಕಡಿತ**

ಡಿಸೆಂಬರ್ ತಿಂಗಳಿನ ಈರುಳ್ಳಿ ಶಾಕ್ ಮತ್ತು ಇರಾನ್‌ನಲ್ಲಿನ ಸಂಘರ್ಷದಿಂದಾಗಿ ಗ್ರಾಹಕ ಹಣದುಬ್ಬರದಲ್ಲಿ ಕೊಂಚ ಏರಿಕೆಯಾಗಿತ್ತು. ಹಣದುಬ್ಬರ ಸ್ಥಿರವಾಗಿಸಲು ಯಾವ ಕ್ರಮ ತೆಗೆದುಕೊಳ್ಳುತ್ತಾರೆ ಎಂಬುದರ ಮೇಲೆ ಜನರ ಕಣ್ಣಿದೆ.

**ವಸತಿ ಯೋಜನೆಗಳಿಗೆ ತೆರಿಗೆ ವಿನಾಯ್ತಿ**

ಸದ್ಯ 45 ಲಕ್ಷಕ್ಕಿಂತ ಕಡಿಮೆ ದರದ ಮನೆ ಖರೀದಿ ಮಾಡಿದರೆ 1.5 ಲಕ್ಷ ರೂ. ತೆರಿಗೆ ವಿನಾಯ್ತಿ ಉಂಟು. ಈ ವಿನಾಯ್ತಿಯನ್ನು 75 ಲಕ್ಷ ರೂ. ಮೌಲ್ಯದ ಮನೆ ಖರೀದಿಗೂ ವಿಸ್ತರಣೆ ಮಾಡಿ ಎಂಬ ಬೇಡಿಕೆ ಇದೆ.

**ಪ್ರಗತಿದರ ಏರಿಕೆ ನಿರೀಕ್ಷೆ**

ಮುಖ್ಯ ಆರ್ಥಿಕ ಸಲಹೆಗಾರ ಕೃಷ್ಣಮೂರ್ತಿ ಸುಬ್ರಮಣಿಯನ್ ತಂಡ ರೂಪಿಸಿದ ಆರ್ಥಿಕ ಸಮೀಕ್ಷೆಯನ್ನು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಶುಕ್ರವಾರ ಬಿಡುಗಡೆ ಮಾಡಿದ್ದಾರೆ. ಇದರಂತೆ 2020-21ರಲ್ಲಿ ದೇಶದ ಪ್ರಗತಿದರ ಶೇ.6ರಿಂದ ಶೇ.6.5ಕ್ಕೆ ಏರಿಕೆಯಾಗಲಿದೆ ಎಂದು ಅಂದಾಜಿಸಲಾಗಿದೆ.

### ಸಮೀಕ್ಷೆಯ ಹೈಲೈಟ್ಸ್

1. ಚೀನಾ ಮಾದರಿ ಅನುಸರಿಸಿ ವರ್ಷಕ್ಕೆ 4 ಕೋಟಿ ಉದ್ಯೋಗ ಸೃಷ್ಟಿ
2. ಜಾಗತಿಕ ವ್ಯಾಪಾರ ಸಂಘರ್ಷಗಳಿಂದಾಗಿ ದೇಶದ ಆರ್ಥಿಕತೆಗೆ ಪೆಟ್ಟು
3. ಅಮೆರಿಕ-ಇರಾನ್ ಸಂಘರ್ಷದಿಂದಾಗಿ ಎಫ್‌ಡಿಐ ಹರಿವು ಕಡಿಮೆ
4. ಸಾರ್ವಜನಿಕ ಉದ್ದಿಮೆಗಳಿಂದ ಪರಿಣಾಮಕಾರಿಯಾಗಿ ಬಂಡವಾಳ ವಾಪಸಾತಿ
5. 2020-2025ರ ವರೆಗೆ ಮೂಲಸೌಕರ್ಯಕ್ಕಾಗಿ 102 ಕೋಟಿ ರೂ. ಹೂಡಿಕೆ
6. 2025ರ ವೇಳೆಗೆ 5 ಟ್ರಿಲಿಯನ್ ಡಾಲರ್ ಆರ್ಥಿಕತೆ ಮಾಡುವ ಬಗ್ಗೆ ಪುನರುಚ್ಚಾರ, ಇದಕ್ಕಾಗಿ ಮೂಲಸೌಕರ್ಯಕ್ಕಾಗಿ 1.4 ಟ್ರಿಲಿಯನ್ ಡಾಲರ್ ಬಳಕೆ ಅನಿವಾರ್ಯ

# ನಿರ್ಮಲಾ ಬಜೆಟ್ ಸವಾಲ್

9.8. 1-2-20

» ಮೊದಲ ಪುಟದಿಂದ

ಕಾರ್ಪೊರೇಟ್ ವಲಯವು ಉದ್ಯೋಗ ಮತ್ತು ಉದ್ಯೋಗ ನೀತಿಗೆ ಸಂಬಂಧಿಸಿದ ಘೋಷಣೆಗಳ ನಿರೀಕ್ಷೆಯಲ್ಲಿದೆ. ಕಂಪನಿಗಳು ಡಿವಿಡೆಂಡ್ ಡಿಸ್ಟ್ರಿಬ್ಯೂಷನ್ ತೆರಿಗೆಯನ್ನು ರದ್ದುಪಡಿಸಬೇಕು ಎಂದು ಮನವಿ ಸಲ್ಲಿಸಿದ್ದಾರೆ. ಹೂಡಿಕೆದಾರರು ಸ್ಥಿರ ನೀತಿಗಳ ನಿರೀಕ್ಷೆಯಲ್ಲಿದ್ದಾರೆ. ಹಣಕಾಸು ತಜ್ಞರು ವಿತ್ತೀಯ ಕೊರತೆ ನಿಯಂತ್ರಣಕ್ಕೆ ಕ್ರಮಗಳನ್ನು ಬಯಸುತ್ತಿದ್ದಾರೆ. ರಿಯಾಲ್ಟಿ, ಆಟೋಮೊಬೈಲ್ ವಲಯ ಕೂಡ ನೆರವಿನ ನಿರೀಕ್ಷೆಯಲ್ಲಿವೆ.

ಆಯವ್ಯಯ ಮಂಡನೆ ಬೆನ್ನಲ್ಲೇ, ಈ ಬಾರಿಯ ಬಜೆಟ್ ಅಧಿವೇಶನ ಕೇಂದ್ರ ಸರಕಾರ ಮತ್ತು ಪ್ರತಿಪಕ್ಷಗಳ ನಡುವೆ ತೀವ್ರ ಮಾತಿನ ಚಕಮಕಿಗೆ ಸಾಕ್ಷಿಯಾಗುವ ಸಾಧ್ಯತೆಯಿದೆ. ಶುಕ್ರವಾರದಿಂದಲೇ ಆರಂಭವಾಗಿರುವ ಬಜೆಟ್ ಅಧಿವೇಶನ ಎರಡು ಹಂತಗಳಲ್ಲಿ ನಡೆಯಲಿದೆ. ಮೊದಲ ಹಂತದಲ್ಲಿ ಜ.31ರಿಂದ ಫೆ. 11ರ ತನಕ ನಡೆದರೆ, ಎರಡನೇ ಹಂತದ ಬಜೆಟ್ ಅಧಿವೇಶನ ಮಾ. 2ರಿಂದ ಆರಂಭವಾಗಿ ಏಪ್ರಿಲ್ 3ಕ್ಕೆ ಮುಕ್ತಾಯವಾಗಲಿದೆ.

## ಮೇಕ್ ಇನ್ ಇಂಡಿಯಾಗೆ ಉತ್ತೇಜನ?

**ಭಾರತ ಕೂಡ ಚೀನಾ ಮಾದರಿಯ ಉತ್ಪಾದನೆ ಮತ್ತು ಬಿಸಿನೆಸ್ ಮಾದರಿ ಅನುಸರಿಸಿದರೆ 2025ರ ವೇಳೆಗೆ 4 ಕೋಟಿಗೂ ಹೆಚ್ಚು ಉದ್ಯೋಗ ಕಲ್ಪಿಸಬಹುದು ಎಂದು 2020ರ ಆರ್ಥಿಕ ಸಮೀಕ್ಷೆ ತಿಳಿಸಿದೆ. 2030ರ ವೇಳೆಗೆ 8 ಕೋಟಿ ಉದ್ಯೋಗ ಕಲ್ಪಿಸಬಹುದು ಎಂದೂ ವಿವರಿಸಿದೆ. ಹೀಗಾಗಿ ಬಜೆಟ್‌ನಲ್ಲಿ ರಫ್ತು ಆಧಾರಿತ ಉತ್ಪಾದನೆ ಹೆಚ್ಚಿಸಲು ಹೊಸ ನೀತಿ ಘೋಷಣೆಯಾಗುವ ನಿರೀಕ್ಷೆ ಇದೆ.**

## ಆಹಾರ ಸಬ್ಸಿಡಿ ಕಡಿತ?

**ಜಿಡಿಪಿ ಪ್ರಮಾಣ ಕಳೆದ ಕಳೆದ 11 ವರ್ಷಗಳಲ್ಲಿಯೇ ಕನಿಷ್ಠ ಮಟ್ಟದಲ್ಲಿ ಇರುವುದರಿಂದ ವಿತ್ತೀಯ ಕೊರತೆ ನಿಯಂತ್ರಿಸಲು ಸಬ್ಸಿಡಿ ಕಡಿತಕ್ಕೆ ಆರ್ಥಿಕ ಸಮೀಕ್ಷೆ ಸಲಹೆ ನೀಡಿದೆ. ಹೀಗಾಗಿ ಆಹಾರ ಸಬ್ಸಿಡಿ ಕಡಿಮೆ ಮಾಡುವ ಸಂಭವವೂ ಇದೆ.**